# ಕರ್ನಾಟಕ ಸರ್ಕಾರ

ಸಂಖ್ಯೆ: ಡಿಟಿಇ/01/ಇಎಸ್‌ಟಿ(9)2018 /1105

ನಿರ್ದೇಶಕರವರ ಕಛೇರಿ,
ತಾಂತ್ರಿಕ ಶಿಕ್ಷಣ ಇಲಾಖೆ,
ಬೆಂಗಳೂರು-560 001,
ದಿನಾಂಕ: 02-07-2018

## ಹಿಂಬರಹ

ಕರ್ನಾಟಕ ಸರ್ಕಾರದ ನಡವಳಿಗಳು: ಸರ್ಕಾರಿ ಆದೇಶದ ಪತ್ರ ಸಂಖ್ಯೆ: ಆಇ 34 ಪಿಇಎಸ್ 2018 ಬೆಂಗಳೂರು ದಿನಾಂಕ:23/06/2018ರ ಪ್ರತಿಯನ್ನು ಮಾಹಿತಿಗಾಗಿ ಈ ಕೆಳಕಂಡವರಿಗೆ ಕಳುಹಿಸಿಕೊಡಲಾಗಿದೆ.

1. ಈ ಇಲಾಖೆಯ ಅಧೀನಕ್ಕೊಳಪಡುವ ಎಲ್ಲಾ ಸರ್ಕಾರಿ ಇಂಜಿನಿಯರಿಂಗ್ ಕಾಲೇಜುಗಳು, ಸರ್ಕಾರಿ ಪಾಲಿಟೆಕ್ನಿಕ್, ಸರ್ಕಾರಿ ಕಿರಿಯ ತಾಂತ್ರಿಕ ಶಾಲೆಗಳು, ಸ್ಟಿರಿಕ್ ಸಂಸ್ಥೆ, ಬೆಂಗಳೂರು, ಸರ್ಕಾರಿ ಗಣಿ ಶಿಕ್ಷಣ ಶಾಲೆ, ಕೆ.ಜಿ.ಎಫ್ ಸಂಸ್ಥೆಗಳ ಪ್ರಿನ್ಸಿಪಾಲರುಗಳಿಗೆ ಮಾಹಿತಿಗಾಗಿ [ಇಲಾಖಾ ವೆಬ್‌ಸೈಟ್ ಮುಖಾಂತರ]
2. ಈ ನಿರ್ದೇಶನಾಲಯದ ಎಲ್ಲಾ ಅಧಿಕಾರಿಗಳಿಗೆ, ಜಂಟಿ ನಿರ್ದೇಶಕರು(ಆಡಳಿತ), ಆಡಳಿತಾಧಿಕಾರಿ, ಸಹಾಯಕ ಆಡಳಿತಾಧಿಕಾರಿ (1), (2) ಹಾಗೂ (3) ಹಾಗೂ ರಿಜಿಸ್ಟ್ರಾರ್ [ಆಡಳಿತ], ಸಾರ್ವಜನಿಕ ಸಂಪರ್ಕಾಧಿಕಾರಿ
3. ನಿರ್ದೇಶಕರ ಆಪ್ತ ಶಾಖೆಗೆ
4. ಈ ನಿರ್ದೇಶನಾಲಯದ ನಗದು ವಿಭಾಗಕ್ಕೆ ಮಾಹಿತಿಗಾಗಿ
5. ಈ ನಿರ್ದೇಶನಾಲಯದ ಇ.ಎಸ್.ಟಿ.(7) ವಿಭಾಗಕ್ಕೆ ಮಾಹಿತಿಗಾಗಿ
6. ಈ ನಿರ್ದೇಶನಾಲಯದ ಇ.ಎಸ್.ಟಿ.(1) ರಿಂದ (10) ವಿಭಾಗಕ್ಕೆ ಮಾಹಿತಿಗಾಗಿ
7. ಈ ನಿರ್ದೇಶನಾಲಯದ ಇ-ಆಡಳಿತ ವಿಭಾಗಕ್ಕೆ ಮಾಹಿತಿ ಹಾಗೂ ಮುಂದಿನ ಕ್ರಮಕ್ಕಾಗಿ

ಆಡಳಿತಾಧಿಕಾರಿ

KK

Sh-est(9) Endsmnt

## ಕರ್ನಾಟಕ ಸರ್ಕಾರದ ನಡವಳಿಗಳು

**ವಿಷಯ:** ದಿನಾಂಕ: 01.4.2006ರಂದು ಮತ್ತು ನಂತರ ಸರ್ಕಾರಿ ಸೇವೆಗೆ ನೇಮಕ ಹೊಂದಿರುವ ಹೊಸ ವ್ಯಾಖ್ಯಾನಿಸಿದ ಅಂಶದಾಯಿ ಪಿಂಚಣಿ ಕೊಡುಗೆ ಯೋಜನೆಗೆ ಒಳಪಡುವ ಸರ್ಕಾರಿ ನೌಕರರಿಗೆ ನಿವೃತ್ತಿ ಮತ್ತು ಮರಣ ಉಪದಾನ ಹಾಗೂ ಕುಟುಂಬ ಪಿಂಚಣಿ ಸೌಲಭ್ಯವನ್ನು ವಿಸ್ತರಿಸುವ ಬಗ್ಗೆ.

**ಓದಲಾಗಿದೆ:**

1) ಸರ್ಕಾರಿ ಆದೇಶ ಸಂಖ್ಯೆ: ಆಇ(ಸ್ಪೆಷಲ್) 04 ಪಿಇಟ 2005, ದಿನಾಂಕ: 31.03.2006.
2) ಸರ್ಕಾರಿ ಆದೇಶ ಸಂಖ್ಯೆ: ಆಇ 03 ಸೇನಿಸೇ 2010, ದಿನಾಂಕ: 12.10.2010 ಮತ್ತು 15.04.2011.
3) ಸರ್ಕಾರಿ ಆದೇಶ ಸಂಖ್ಯೆ: ಆಇ 06 ಎಸ್‌ಆರ್‌ಪಿ 2018, ದಿನಾಂಕ: 01.03.2018.

**ಪ್ರಸ್ತಾವನೆ:-**

ಮೇಲೆ ಓದಲಾದ ಸರ್ಕಾರಿ ಆದೇಶ (1)ರಲ್ಲಿ ದಿನಾಂಕ: 01.4.2006ರಂದು ಮತ್ತು ನಂತರ ಸರ್ಕಾರಿ ಸೇವೆಗೆ ಸೇರುವ ನೌಕರರಿಗೆ ಹೊಸ ವ್ಯಾಖ್ಯಾನಿಸಿದ ಅಂಶದಾಯಿ ಪಿಂಚಣಿ ಕೊಡುಗೆ ಯೋಜನೆಯನ್ನು ಕಡ್ಡಾಯಗೊಳಿಸಲಾಗಿದೆ.

ಮೇಲೆ ಓದಲಾದ ಸರ್ಕಾರಿ ಆದೇಶ (2)ರಲ್ಲಿ, ದಿನಾಂಕ: 01.04.2006ರಂದು ಮತ್ತು ನಂತರ ಸರ್ಕಾರಿ ಸೇವೆಗೆ ಸೇರಿದ ಹೊಸ ವ್ಯಾಖ್ಯಾನಿಸಿದ ಅಂಶದಾಯಿ ಪಿಂಚಣಿ ಕೊಡುಗೆ ಯೋಜನೆಯ ವ್ಯಾಪ್ತಿಗೆ ಬರುವ ರಾಜ್ಯ ಸರ್ಕಾರಿ ನೌಕರರು ಸೇವೆಯಲ್ಲಿದ್ದಾಗಲೇ ಮೃತಪಟ್ಟಲ್ಲಿ ಅವರ ಕುಟುಂಬಕ್ಕೆ ಇಡಿಗಂಟಿನ ಪರಿಹಾರವನ್ನು ನೀಡಲು ಮಂಜೂರಾತಿ ನೀಡಲಾಗಿದೆ.

ಮೇಲೆ ಓದಲಾದ ಉಲ್ಲೇಖ (3)ರ ಸರ್ಕಾರಿ ಆದೇಶದಲ್ಲಿ, 6ನೇ ರಾಜ್ಯ ವೇತನ ಆಯೋಗವು ಹೊಸ ವ್ಯಾಖ್ಯಾನಿಸಿದ ಅಂಶದಾಯಿ ಪಿಂಚಣಿ ಕೊಡುಗೆ ಯೋಜನೆಗೆ ಒಳಪಡುವ ಸರ್ಕಾರಿ ನೌಕರರಿಗೆ ನಿವೃತ್ತಿ/ಮರಣ ಉಪದಾನ ಸೌಲಭ್ಯವನ್ನು ಹಳೆಯ ಪಿಂಚಣಿ ಯೋಜನೆಯ ವ್ಯಾಪ್ತಿಗೆ ಒಳಪಡುವ ಸರ್ಕಾರಿ ನೌಕರರಿಗೆ ವಿಸ್ತರಿಸಿರುವ ರೀತಿಯಲ್ಲಿಯೇ ವಿಸ್ತರಿಸುವಂತೆ ಮತ್ತು ಸೇವೆಯಲ್ಲಿರುವಾಗಲೇ ನಿಧನರಾಗುವ ಅಂತಹ ನೌಕರರ ಅವಲಂಬಿತ ಕುಟುಂಬಕ್ಕೆ ಕುಟುಂಬ ಪಿಂಚಣಿ ಸೌಲಭ್ಯವನ್ನು ಪರಿಗಣಿಸುವಲ್ಲಿ ಮಾಡಿರುವ ಶಿಫಾರಸ್ಸುಗಳನ್ನು ಸರ್ಕಾರವು ಒಪ್ಪಿರುವುದರಿಂದ, ಈ ಕೆಳಕಂಡ ಆದೇಶವನ್ನು ಹೊರಡಿಸಿದೆ.

**ಸರ್ಕಾರದ ಆದೇಶ ಸಂಖ್ಯೆ: ಆಇ 34 ಪಿಇಎನ್ 2018, ಬೆಂಗಳೂರು, ದಿನಾಂಕ: 23.06.2018**

ಪ್ರಸ್ತಾವನೆಯಲ್ಲಿ ವಿವರಿಸಿರುವ ಅಂಶಗಳ ಹಿನ್ನೆಲೆಯಲ್ಲಿ, ದಿನಾಂಕ: 01.04.2006ರಂದು ಮತ್ತು ನಂತರ ಸರ್ಕಾರಿ ಸೇವೆಗೆ ಸೇರಿದ ಹೊಸ ವ್ಯಾಖ್ಯಾನಿಸಿದ ಅಂಶದಾಯಿ ಪಿಂಚಣಿ

ಕೊಡುಗೆ ಯೋಜನೆಯಡಿ ಬರುವ ಸರ್ಕಾರಿ ನೌಕರರಿಗೆ ಈ ಕೆಳಕಂಡಂತೆ ನಿವೃತ್ತಿ ಸೌಲಭ್ಯಗಳನ್ನು ವಿಸ್ತರಿಸಲಾಗಿದೆ:

1. **ನಿವೃತ್ತಿ ಉಪದಾನ:**

ಹಳೆಯ ಪಿಂಚಣಿ ಯೋಜನೆಯ ವ್ಯಾಪ್ತಿಗೆ ಬರುವ ಸರ್ಕಾರಿ ನೌಕರರಿಗೆ ವಿಸ್ತರಿಸಿರುವ ರೀತಿಯಲ್ಲಿಯೇ ಹೊಸ ವ್ಯಾಖ್ಯಾನಿಸಿದ ಅಂಶದಾಯಿ ಪಿಂಚಣಿ ಕೊಡುಗೆ ಯೋಜನೆಯಡಿ ನಿವೃತ್ತರಾಗುವ ಸರ್ಕಾರಿ ನೌಕರರಿಗೂ ದಿನಾಂಕ: 01.04.2018ರಿಂದ ಜಾರಿಗೆ ಬರುವಂತೆ ಅನ್ವಯಿಸಿ ನಿವೃತ್ತಿ ಉಪದಾನ ಸೌಲಭ್ಯವನ್ನು ವಿಸ್ತರಿಸಲಾಗಿದೆ ಹಾಗೂ ನಿವೃತ್ತಿ ಉಪದಾನದ ಮೊತ್ತವು ಗರಿಷ್ಠ ಮಿತಿ ರೂ.20.00ಲಕ್ಷ ಗಳಿಗೊಳಪಟ್ಟಿರುತ್ತದೆ.

2. **ಮರಣ ಉಪದಾನ:**

2.1 ಹಳೆಯ ಪಿಂಚಣಿ ಯೋಜನೆಯ ವ್ಯಾಪ್ತಿಗೆ ಒಳಪಡುವ ಸರ್ಕಾರಿ ನೌಕರರ ಅವಲಂಬಿತ ಕುಟುಂಬಕ್ಕೆ ವಿಸ್ತರಿಸಿರುವ ರೀತಿಯಲ್ಲಿಯೇ, ಹೊಸ ವ್ಯಾಖ್ಯಾನಿಸಿದ ಅಂಶದಾಯಿ ಪಿಂಚಣಿ ಕೊಡುಗೆ ಯೋಜನೆಗೆ ಒಳಪಟ್ಟಿದ್ದು ಸೇವೆಯಲ್ಲಿರುವಾಗಲೇ ಮರಣ ಹೊಂದುವ ಸರ್ಕಾರಿ ನೌಕರರ ಅವಲಂಬಿತ ಕುಟುಂಬಕ್ಕೆ ದಿನಾಂಕ: 01–04–2018ರಿಂದ ಜಾರಿಗೆ ಬರುವಂತೆ ಅನ್ವಯಿಸಿ ಮರಣ ಉಪದಾನ ಸೌಲಭ್ಯವನ್ನು ವಿಸ್ತರಿಸಲಾಗಿದೆ ಹಾಗೂ ಮರಣ ಉಪದಾನದ ಮೊತ್ತವು ಗರಿಷ್ಠ ಮಿತಿ ರೂ.20.00ಲಕ್ಷಗಳಿಗೊಳಪಟ್ಟಿರುತ್ತದೆ.

2.2 ದಿನಾಂಕ: 31.03.2018ರ ಪೂರ್ವದಲ್ಲಿ ಸೇವೆಯಲ್ಲಿರುವಾಗಲೇ ಮರಣ ಹೊಂದಿದ ಹೊಸ ವ್ಯಾಖ್ಯಾನಿಸಿದ ಅಂಶದಾಯಿ ಪಿಂಚಣಿ ಕೊಡುಗೆ ಯೋಜನೆಯ ವ್ಯಾಪ್ತಿಗೆ ಬರುವ ಸರ್ಕಾರಿ ನೌಕರರಿಗೆ ಸರ್ಕಾರದ ಆದೇಶ ಸಂಖ್ಯೆ: ಆಇ 03 ಸೇನಿಸೇ 2010, ದಿನಾಂಕ: 12.10.2010 ಮತ್ತು 15.04.2011ರಲ್ಲಿ ಈಗಾಗಲೇ ನೀಡಿರುವ ಇಡಿಗಂಟಿನ ಪರಿಹಾರದ ಸೌಲಭ್ಯವು ಅನ್ವಯಿಸಲಿದ್ದು, ಅದನ್ನು ಪುನರ್ ಪರಿಷ್ಕರಿಸತಕ್ಕದ್ದಲ್ಲ.

2.3 ಹೊಸ ವ್ಯಾಖ್ಯಾನಿಸಿದ ಅಂಶದಾಯಿ ಪಿಂಚಣಿ ಕೊಡುಗೆ ಯೋಜನೆಗೆ ಒಳಪಟ್ಟಿದ್ದು ಸೇವೆಯಲ್ಲಿರುವಾಗಲೇ ನಿಧನ ಹೊಂದುವ ಅಂತಹ ಸರ್ಕಾರಿ ನೌಕರರ ಅವಲಂಬಿತ ಕುಟುಂಬಕ್ಕೆ ಮರಣ ಉಪದಾನದ ಸೌಲಭ್ಯವನ್ನು ಈ ಆದೇಶಾನುಸಾರ ಪರಿಗಣಿಸಿ ವಿಸ್ತರಿಸಿರುವ ತತ್ಪರಿಣಾಮವಾಗಿ, ಸರ್ಕಾರಿ ಆದೇಶ ಸಂಖ್ಯೆ: ಆಇ 03 ಸೇನಿಸೇ 2010, ದಿನಾಂಕ: 12.10.2010 ಮತ್ತು 15.04.2011 ರನ್ವಯ ವಿಸ್ತರಿಸಲಾಗಿದ್ದ ಇಡಿಗಂಟಿನ ಸೌಲಭ್ಯವನ್ನು ದಿನಾಂಕ: 01.04.2018ರಿಂದ ಅನ್ವಯಿಸಿ ಹಿಂಪಡೆಯಲಾಗಿದೆ.

3. ಕುಟುಂಬ ಪಿಂಚಣಿ:

3.1 ದಿನಾಂಕ: 01.04.2018ರಂದು ಅಥವಾ ತದನಂತರ ಸೇವೆಯಲ್ಲಿರುವಾಗಲೇ ಮರಣ ಹೊಂದಿದ ಹೊಸ ವ್ಯಾಖ್ಯಾನಿಸಿದ ಅಂಶದಾಯಿ ಪಿಂಚಣಿ ಕೊಡುಗೆ ಯೋಜನೆಯ ವ್ಯಾಪ್ತಿಗೆ ಬರುವ ಸರ್ಕಾರಿ ನೌಕರರ ಅವಲಂಬಿತರು ಆಯ್ಕೆ ಮಾಡಿಕೊಂಡಲ್ಲಿ, ಮೃತ ನೌಕರರ ಪಿಂಚಣಿ ನಿಧಿಯಲ್ಲಿ ಕ್ರೋಢೀಕೃತವಾದ ಮೊತ್ತವನ್ನು ಸರ್ಕಾರವು ಹಿಂಪಡೆಯುವ ಷರತ್ತಿಗೊಳಪಟ್ಟು, ಕರ್ನಾಟಕ ಸರ್ಕಾರಿ ನೌಕರರ (ಕುಟುಂಬ ಪಿಂಚಣಿ) ನಿಯಮಗಳು, 2002ರನ್ವಯ ಕುಟುಂಬ ಪಿಂಚಣಿ ಸೌಲಭ್ಯವನ್ನು ವಿಸ್ತರಿಸಲಾಗಿದೆ.

3.2 ಈ ಉದ್ದೇಶಕ್ಕಾಗಿ ಮೃತ ಸರ್ಕಾರಿ ನೌಕರನ ಅವಲಂಬಿತರು ನೀಡುವ ಆಯ್ಕೆಯು ಐಚ್ಛಿಕವಾಗಿರುವುದಾಗಿದೆ. ಈ ಮೇರೆಗೆ ಒಮ್ಮೆ ಮೃತ ನೌಕರರ ಪಿಂಚಣಿ ನಿಧಿಯಲ್ಲಿನ ಮೊತ್ತವನ್ನು ಸರ್ಕಾರವು ಹಿಂಪಡೆಯುವ ಇಚ್ಛೆಯೊಂದಿಗೆ ಕುಟುಂಬ ಪಿಂಚಣಿ ಸೌಲಭ್ಯವನ್ನು ಆಯ್ಕೆ ಮಾಡಿಕೊಂಡ ತರುವಾಯದಲ್ಲಿ ಮುಂದಿನ ದಿನಗಳಲ್ಲಿ ಸದರಿ ಆಯ್ಕೆಯನ್ನು ಪರಿಷ್ಕರಿಸಿ ಕುಟುಂಬ ಪಿಂಚಣಿ ಬದಲಿಗೆ ಪಿಂಚಣಿ ನಿಧಿಯಲ್ಲಿನ ಮೊತ್ತವನ್ನು ಪಾವತಿಸುವಂತೆ ಕೋರಿಕೆ ಸಲ್ಲಿಸುವ ಅಥವಾ ಪಿಂಚಣಿ ನಿಧಿಯಲ್ಲಿನ ಮೊತ್ತವನ್ನು ಪಡೆಯಲು ಇಚ್ಛಿಸಿ ಪಡೆದ ತರುವಾಯದಲ್ಲಿ ಮುಂದಿನ ದಿನಗಳಲ್ಲಿ ಸದರಿ ಸೌಲಭ್ಯದ ಬದಲಿಗೆ ಸರ್ಕಾರಕ್ಕೆ ಪಿಂಚಣಿ ನಿಧಿಯಿಂದ ಪಡೆದ ಮೊತ್ತವನ್ನು ಹಿಂಪಾವತಿಸುವ ಮೇರೆಗೆ ಕುಟುಂಬ ಪಿಂಚಣಿ ಸೌಲಭ್ಯವನ್ನು ಕೋರುವಲ್ಲಿ ಅವಕಾಶಗಳಿಲ್ಲ ಮತ್ತು ಈ ಸಂಬಂಧದ ಮಂಜೂರಾತಿ ಸಮಯದಲ್ಲಿ ನೀಡುವ ಆಯ್ಕೆಯೇ ಅಂತಿಮವಾಗಿದ್ದು, ಯಾವುದೇ ಸಂದರ್ಭ/ಕಾರಣಗಳಿಗಾಗಿ ಬದಲಾವಣೆಗೆ ಅವಕಾಶವಿರುವುದಿಲ್ಲ.

ಸಂಬಂಧಪಟ್ಟ ನಿಯಮಗಳಿಗೆ ಪ್ರತ್ಯೇಕವಾಗಿ ಸೂಕ್ತ ತಿದ್ದುಪಡಿಗಳನ್ನು ಹೊರಡಿಸಲಾಗುವುದು.

ಕರ್ನಾಟಕ ರಾಜ್ಯಪಾಲರ ಆದೇಶಾನುಸಾರ
ಮತ್ತು ಅವರ ಹೆಸರಿನಲ್ಲಿ,
23.6
(ಪ್ರಕಾಶ್.ವೈ.ಕೆ)
ಸರ್ಕಾರದ ಜಂಟಿ ಕಾರ್ಯದರ್ಶಿ,
ಆರ್ಥಿಕ ಇಲಾಖೆ(ವಿಶ್ರಾಂತಿ ವೇತನ).

ಇವರಿಗೆ:

1) ಸರ್ಕಾರದ ಮುಖ್ಯ ಕಾರ್ಯದರ್ಶಿ/ ಅಪರ ಮುಖ್ಯ ಕಾರ್ಯದರ್ಶಿಗಳು.

2) ಸರ್ಕಾರದ ಮುಖ್ಯಕಾರ್ಯದರ್ಶಿಯವರ ಆಪ್ತ ಕಾರ್ಯದರ್ಶಿ, ಸಚಿವ ಸಂಪುಟ ಶಾಖೆ.
3) ಸರ್ಕಾರದ ಪ್ರಧಾನ ಕಾರ್ಯದರ್ಶಿಗಳು/ ಕಾರ್ಯದರ್ಶಿಗಳು.
4) ಎಲ್ಲಾ ಇಲಾಖಾ ಮುಖ್ಯಸ್ಥರುಗಳು.
5) ಎಲ್ಲಾ ಜಿಲ್ಲೆಗಳ ಜಿಲ್ಲಾಧಿಕಾರಿಗಳು.
6) ಜಿಲ್ಲಾ ಪಂಚಾಯತ್‌ಗಳ ಮುಖ್ಯ ಕಾರ್ಯನಿರ್ವಾಹಕ ಅಧಿಕಾರಿಗಳು.
7) ಮಹಾಲೇಖಪಾಲರು (ಲೆಕ್ಕಪತ್ರ / ಲೆಕ್ಕಪರಿಶೋಧನೆ) ಜಿ.ಎಂ ಶಾಖೆ , ಬೆಂಗಳೂರು.
8) ರಿಜಿಸ್ಟ್ರಾರ್, ಕರ್ನಾಟಕ ಉಚ್ಚ ನ್ಯಾಯಾಲಯ, ಬೆಂಗಳೂರು.
9) ಕಾರ್ಯದರ್ಶಿ, ಕರ್ನಾಟಕ ಲೋಕಸೇವಾ ಆಯೋಗ, ಬೆಂಗಳೂರು.
10) ಕಾರ್ಯದರ್ಶಿ, ಕರ್ನಾಟಕ ವಿಧಾನ ಸಭೆ/ ಕರ್ನಾಟಕ ವಿಧಾನ ಪರಿಷತ್ತು, ಬೆಂಗಳೂರು.
11) ರಿಜಿಸ್ಟ್ರಾರ್, ಕರ್ನಾಟಕ ಆಡಳಿತ ನ್ಯಾಯ ಮಂಡಳಿ, ಬೆಂಗಳೂರು.
12) ರಿಜಿಸ್ಟ್ರಾರ್, ಕರ್ನಾಟಕ ಲೋಕಾಯುಕ್ತ, ಬೆಂಗಳೂರು.
13) ಖಜಾನಾಧಿಕಾರಿಗಳು, ರಾಜ್ಯ ಹುಜೂರು ಖಜಾನೆ, ಬೆಂಗಳೂರು ಮತ್ತು ಎಲ್ಲಾ ಜಿಲ್ಲಾ ಖಜಾನೆಗಳು.
14)ಎಲ್ಲಾ ಮುಖ್ಯಕಾರ್ಯನಿರ್ವಾಹಕ ಅಧಿಕಾರಿಗಳು, ಜಿಲ್ಲಾ ಪಂಚಾಯತ್.
15)ಸಂಕಲನಕಾರರು, ಕರ್ನಾಟಕ ಗೆಜೆಟ್‌ನ ಮುಂದಿನ ಪ್ರಕಟಣೆಯಲ್ಲಿ ಪ್ರಕಟಿಸುವುದಕ್ಕಾಗಿ.
16)ಅಧ್ಯಕ್ಷರು, ಕರ್ನಾಟಕ ರಾಜ್ಯ ಸರ್ಕಾರಿ ನೌಕರರ ಸಂಘ, ಕಬ್ಬನ್ ಉದ್ಯಾನವನ.
17)ಅಧ್ಯಕ್ಷರು, ಕರ್ನಾಟಕ ರಾಜ್ಯ ಎನ್.ಪಿ.ಎಸ್.ನೌಕರರ ಸಂಘ, ಬೆಂಗಳೂರು.
18)ಕರ್ನಾಟಕ ಸರ್ಕಾರದ ಸಚಿವಾಲಯದ ಎಲ್ಲಾ ಶಾಖೆಗಳು.
19)ಕರ್ನಾಟಕ ಸರ್ಕಾರ ಸಚಿವಾಲಯದ ಗ್ರಂಥಾಲಯ/ವಿಧಾನ ಮಂಡಲದ ಗ್ರಂಥಾಲಯ,
20) ವಾರಪತ್ರ/ಶಾಖಾ ರಕ್ಷಾ ಕಡತ/ಹೆಚ್ಚುವರಿ ಪ್ರತಿಗಳು.

ಕರ್ನಾಟಕ ಸರ್ಕಾರದ ಆರ್ಥಿಕ ಇಲಾಖೆಯ ಅಂತರ್ಜಾಲತಾಣ:
www.finance.kar.nic.in ವೀಕ್ಷಿಸಿ